**All India Radio: Bangalore**
**National Bulletin In Kannada**
**20.02.2026  1.10 p.m.**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**20.02.2026  1.10 p.m.**

**<><><><>**

ಮುಖ್ಯಾಂಶಗಳು

1. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ; ಪ್ಯಾಕ್ಸ್ ಸಿಲಿಕಾ ಘೋಷಣಾ ಪತ್ರಕ್ಕೆ ಭಾರತ - ಅಮೆರಿಕ ಸಹಿ
2. ತ್ರಿಪುರಾದ ಅಗರ್ತಲಾದಲ್ಲಿಂದು ಜಂಟಿ ಪ್ರಾದೇಶಿಕ ಅಧಿಕೃತ ಭಾಷಾ ಸಮ್ಮೇಳನ; ಕೇಂದ್ರ ಗೃಹ ಸಚಿವ ಅಮಿತ್ ಶಾ ಚಾಲನೆ
3. ನವದೆಹಲಿಯಲ್ಲಿ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ - ಬ್ರೆಜಿಲ್ ಕೃಷಿ ಸಚಿವರೊಂದಿಗೆ ಸಮಾಲೋಚನೆ
4. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಕೊನೆಯ ಲೀಗ್ ಪಂದ್ಯದಲ್ಲಿಂದು ಆಸ್ಟ್ರೇಲಿಯಾ - ಒಮನ್ ಸೆಣಸು

<><><><>

ನವದೆಹಲಿಯಲ್ಲಿ ನಡೆಯುತ್ತಿರುವ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿಂದು ಭಾರತ ಮತ್ತು ಅಮೆರಿಕ ಮಹತ್ವದ ಪ್ಯಾಕ್ಸ್ ಸಿಲಿಕಾ ಘೋಷಣಾ ಪತ್ರಕ್ಕೆ ಸಹಿ ಹಾಕಿವೆ. ಈ ಘೋಷಣೆ ಸೆಮಿಕಂಡಕ್ಟರ್ ಮತ್ತು ನಿರ್ಣಾಯಕ ಖನಿಜಗಳ ಉತ್ಪಾದನೆ, ವೇಗವಾಗಿ ಬೆಳೆಯುತ್ತಿರುವ ಕೃತಕ ಬುದ್ಧಿಮತ್ತೆ ಕ್ಷೇತ್ರಗಳಲ್ಲಿ ಸುರಕ್ಷಿತ ಮತ್ತು ಸದೃಢ ತಂತ್ರಜ್ಞಾನ ವ್ಯವಸ್ಥೆ ನಿರ್ಮಿಸಲು ಉಭಯ ದೇಶಗಳ ಸಹಕಾರವನ್ನು ಬಲಪಡಿಸಲಿದೆ. ಸಹಿ ಹಾಕುವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಸೆಮಿಕಂಡಕ್ಟರ್ ಮತ್ತು ವಿದ್ಯುನ್ಮಾನ ಉದ್ಯಮದಲ್ಲಿ ಜಾಗತಿಕ ನಾಯಕತ್ವ ವಹಿಸುವುದು ಭಾರತದ ಗುರಿಯಾಗಿದೆ. ದೇಶದ ಪ್ರತಿಭಾವಂತ ಇಂಜಿನಿಯರ್‌ಗಳು ಈಗಾಗಲೇ ಅತ್ಯಂತ ಸಂಕೀರ್ಣವಾದ ೨ ನ್ಯಾನೋ ಮೀಟರ್ ಚಿಪ್‌ಗಳನ್ನು ವಿನ್ಯಾಸ ಗೊಳಿಸುತ್ತಿದ್ದಾರೆ ಎಂದು ತಿಳಿಸಿದರು. ಪ್ರಸ್ತುತ ದೇಶದ ೩೧೫ ವಿಶ್ವವಿದ್ಯಾಲಯಗಳು ಮತ್ತು ಕಾಲೇಜು ವಿದ್ಯಾರ್ಥಿಗಳು ಚಿಪ್ ವಿನ್ಯಾಸದಲ್ಲಿ ತೊಡಗಿದ್ದಾರೆ. ಸೆಮಿಕಂಡಕ್ಟರ್ ಉದ್ಯಮಕ್ಕೆ ಅಗತ್ಯವಿರುವ ಸುಮಾರು ಹತ್ತು ಲಕ್ಷಕ್ಕೂ ಹೆಚ್ಚು ಪ್ರತಿಭಾವಂತ ಮಾನವ ಸಂಪನ್ಮೂಲವನ್ನು ದೇಶದೊಳಗೆ ಪೂರೈಸಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿದ ಭಾರತಕ್ಕೆ ಅಮೆರಿಕ ರಾಯಭಾರಿ ಸರ್ಗಿಯೋಗಾರ್, ರಕ್ಷಣಾ ಸಹಕಾರದಿಂದಿಡಿದು ಪ್ಯಾಕ್ಸ್ ಸಿಲಿಕಾ ವರೆಗಿನ ಭಾರತ-ಅಮೆರಿಕ ಪಾಲುದಾರಿಕೆ ಒಟ್ಟಿಗೆ ಕೆಲಸ ಮಾಡಲು ಇನ್ನೂ ಹೆಚ್ಚಿನ ಬಾಗಿಲುಗಳನ್ನು ತೆರೆಯಲಿದೆ ಎಂದು ಹೇಳಿದ್ದಾರೆ. ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಪ್ಯಾಕ್ಸ್ ಸಿಲಿಕಾ ಘೋಷಣೆ, ಸೆಮಿಕಂಡಕ್ಟರ್ ಪೂರೈಕೆ ಸರಪಳಿ, ಉತ್ಪಾದನೆ ಮತ್ತು ಚಿಪ್ ವಿನ್ಯಾಸಕ್ಕೆ ಅತ್ಯಂತ ಪ್ರಮುಖವಾಗಿದೆ. ಈ ಒಪ್ಪಂದ ಭಾರತದಲ್ಲಿ ಸಂಪೂರ್ಣ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆ ನಿರ್ಮಾಣಕ್ಕೆ ಸಹಕಾರಿಯಾಗಿದ್ದು, ವಿದ್ಯುನ್ಮಾನ ವಲಯಕ್ಕೆ ಪ್ರಯೋಜನವಾಗಲಿದೆ ಎಂದು ಹೇಳಿದರು.

*****ಧ್ವನಿ*** ಅಶ್ವಿನಿ ವೈಷ್ಣವ್**

ಪ್ಯಾಕ್ಸ್ ಸಿಲಿಕಾ ಘೋಷಣಾ ಪತ್ರ ಸಹಿ ಸಮಾರಂಭದಲ್ಲಿ ಮಾತನಾಡಿದ ಅಮೆರಿಕ ಆರ್ಥಿಕ ವ್ಯವಹಾರಗಳ ರಾಜ್ಯ ಕಾರ್ಯದರ್ಶಿ ಜಾಕೋಬ್ ಹೆಲ್ಬರ್ಗ್, ಈ ಒಪ್ಪಂದ ನಾವೀನ್ಯತೆ ಮತ್ತು ಪಾಲುದಾರಿಕೆಯ ಮೂಲಕ ಭವಿಷ್ಯವನ್ನು ನಿರ್ಮಿಸುವ ಉಭಯ ದೇಶಗಳ ಬದ್ಧತೆಯನ್ನು ಪ್ರತಿನಿಧಿಸುತ್ತದೆ ಎಂದರು. ಇದೇ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಗೂಗಲ್ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುಂದರ್ ಪಿಚ್ಚೈ, ಭಾರತ - ಅಮೆರಿಕ ನಡುವೆ ಸಂಪರ್ಕ ಸೇತುವೆಯಾಗಿ ಕಾರ್ಯ ನಿರ್ವಹಿಸಲು ಗೂಗಲ್ ಹೆಮ್ಮೆಪಡುತ್ತದೆ. ಮುಂಬರುವ ದಿನಗಳಲ್ಲಿ ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಭಾರತ ಅಭೂತಪೂರ್ವ ಪ್ರಗತಿ ಕಾಣಲಿದೆ ಎಂದು ತಿಳಿಸಿದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯ ಸೇವಾತೀರ್ಥದಲ್ಲಿಂದು ಕೃತಕ ಬುದ್ಧಿಮತ್ತೆ ಮತ್ತು ಡೀಪ್ ಟೆಕ್ ನವೋದ್ಯಮಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳೊಂದಿಗೆ ದುಂಡುಮೇಜಿನ ಸಭೆ ನಡೆಸಿದರು. ಕೃಷಿ, ಪರಿಸರ ಮತ್ತು ಮಾತೃಭಾಷೆಯಲ್ಲಿ ಉನ್ನತ ಶಿಕ್ಷಣ ನೀಡುವಲ್ಲಿ ಎಐ ತಂತ್ರಜ್ಞಾನದ ಬಳಕೆಯ ಬಗ್ಗೆ ಅವರು ಚರ್ಚಿಸಿದರು. ಸಭೆಯಲ್ಲಿ ಆರೋಗ್ಯ, ಸೈಬರ್ ಭದ್ರತೆ ಮತ್ತು ಬಾಹ್ಯಾಕಾಶ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ೧೬ ಪ್ರಮುಖ ನವೋದ್ಯಮಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಪಾಲ್ಗೊಂಡು ತಮ್ಮ ಆಲೋಚನೆಗಳು ಮತ್ತು ಕಾರ್ಯಗಳನ್ನು ಪ್ರಸ್ತುಪಡಿಸಿದರು. ದತ್ತಾಂಶ ಆಡಳಿತದ ಅಗತ್ಯವನ್ನು ಒತ್ತಿಹೇಳುತ್ತಾ ತಪ್ಪು ಮಾಹಿತಿ ಹರಡುವಿಕೆಯ ಬಗ್ಗೆ ಎಚ್ಚರಿಕೆ ನೀಡಿದ ಪ್ರಧಾನಿ, ಭಾರತೀಯ ನವೋದ್ಯಮಗಳು ದೇಶದ ಅಗತ್ಯಕ್ಕೆ ತಕ್ಕಂತೆ ಪರಿಹಾರಗಳನ್ನು ರೂಪಿಸಬೇಕು ಎಂದು ಕರೆ ನೀಡಿದರು.

<><><>

ವಿಜ್ಞಾನ ನೇತೃತ್ವದ ಆಡಳಿತ ಪ್ರಗತಿಗೆ ಅಡ್ಡಿಯಾಗುವುದಿಲ್ಲ, ಬದಲಾಗಿ ಪರಿಹಾರಗಳಿಗೆ ವೇಗ ನೀಡುತ್ತದೆ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ರಲ್ಲಿ ಮಾತನಾಡಿದ ಅವರು, ವಿಜ್ಞಾನ ನೇತೃತ್ವದ ಆಡಳಿತವು ಎಐ ಅತ್ಯಂತ ವೇಗವಾಗಿ ಉತ್ತಮ ರೀತಿಯಲ್ಲಿ ಮಾಡಬಹುದಾದ ಕ್ಷೇತ್ರಗಳನ್ನು ಗುರುತಿಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.

<><><>

ತ್ರಿಪುರಾದ ಅಗರ್ತಲಾದಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಜಂಟಿ ಪ್ರಾದೇಶಿಕ ಅಧಿಕೃತ ಭಾಷಾ ಸಮ್ಮೇಳವನ್ನು ಉದ್ಘಾಟಿಸಲಿದ್ದಾರೆ. ಈ ಸಮ್ಮೇಳನದಲ್ಲಿ ಪಶ್ಚಿಮ ಬಂಗಾಳ, ಒಡಿಶಾ, ಅಸ್ಸಾಂ ಮತ್ತು ಉತ್ತರ ಪ್ರದೇಶ ಸೇರಿದಂತೆ ೧೦ ರಾಜ್ಯಗಳು ಭಾಗವಹಿಸಲಿದ್ದು, ಮೂರು ಸಾವಿರಕ್ಕೂ ಅಧಿಕ ಹಿರಿಯ ಅಧಿಕಾರಿಗಳು, ತಜ್ಞರು, ಸರ್ಕಾರಿ ಇಲಾಖೆಗಳ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ. ಸಮ್ಮೇಳನದಲ್ಲಿ ಹಿಂದಿ ಮತ್ತು ಇತರ ಭಾರತೀಯ ಭಾಷೆಗಳನ್ನು ಉತ್ತೇಜಿಸುವುದು, ಭಾಷಾ ಸಂಬಂಧಿತ ಸವಾಲುಗಳನ್ನು ಪರಿಹರಿಸಲು ಕೃತಕ ಬುದ್ಧಿಮತ್ತೆ ಮತ್ತು ಆಧುನಿಕ ತಂತ್ರಜ್ಞಾನಗಳನ್ನು ಬಳಸಿಕೊಳ್ಳುವುದರ ಮೇಲೆ ಚರ್ಚೆಗಳು ಕೇಂದ್ರೀಕರಿಸಲಿವೆ. ಅಧಿಕೃತ ಭಾಷಾ ನೀತಿಯ ಅನುಷ್ಠಾನಕ್ಕಾಗಿ ೮೦ ಪ್ರಾದೇಶಿಕ ಅಧಿಕೃತ ಭಾಷಾ ಪ್ರಶಸ್ತಿಗಳನ್ನು ಕಾರ್ಯಕ್ರಮದಲ್ಲಿ ಪ್ರದಾನ ಮಾಡಲಾಗುವುದು. ಇದರ ಜೊತೆಗೆ ಎರಡು ಪುಸ್ತಕಗಳ ಬಿಡುಗಡೆಯೊಂದಿಗೆ ರಾಜಭಾಷಾ ಭಾರತಿಯ ಈಶಾನ್ಯ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಲಾಗುತ್ತಿದೆ. ಭಾಷಾ ಅನುಷ್ಠಾನದಲ್ಲಿ ನಾವೀನ್ಯತೆಯನ್ನು ಪ್ರದರ್ಶಿಸುವ ಪ್ರದರ್ಶನ ಮತ್ತು ಯೋಗಕ್ಷೇಮವನ್ನು ಉತ್ತೇಜಿಸುವ ವಿಶೇಷ ಯೋಗ ಕಾರ್ಯಾಗಾರ ನಡೆಯಲಿದೆ.

<><><>

ನವದೆಹಲಿಯಲ್ಲಿಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಬ್ರೆಜಿಲ್ ಕೃಷಿ ಸಚಿವ ಕಾರ್ಲೋಸ್ ಫವಾರೊ ಅವರೊಂದಿಗೆ ಸಭೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಸಭೆಯ ವೇಳೆ ಕೃಷಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಬ್ರೆಜಿಲ್ ಸಚಿವರು ಹಾಗೂ ಅವರ ತಂಡದೊಂದಿಗೆ ಉಪಯುಕ್ತ ಚರ್ಚೆಗಳನ್ನು ನಡೆಸಲಾಗಿದೆ. ಭಾರತೀಯ ಕೃಷಿ ಸಂಶೋಧನಾ ಮಂಡಳಿ - ಐಸಿಎಆರ್ ಮತ್ತು ಬ್ರೆಜಿಲ್ ಸಂಸ್ಥೆಗಳು, ವಿವಿಧ ಕ್ಷೇತ್ರಗಳಲ್ಲಿ ಸಹಕರಿಸಲಿವೆ ಎಂದರು. ಬ್ರೆಜಿಲ್, ನೈಸರ್ಗಿಕ ಮತ್ತು ಸಾವಯವ ಕೃಷಿಯಲ್ಲಿ ಆಸಕ್ತಿ ತೋರಿದ್ದು, ಈ ಕ್ಷೇತ್ರಗಳಲ್ಲಿ ಭಾರತ, ಬ್ರೆಜಿಲ್‌ನೊಂದಿಗೆ ಸಮಾಲೋಚನೆ ನಡೆಸುತ್ತಿದ್ದಾರೆ. ಭಾರತ, ಬೇಳೆ-ಕಾಳು, ಎಣ್ಣೆ ಬೀಜ ಯೋಜನೆ ಮತ್ತು ಸಂಯೋಜಿತ ಕೃಷಿಯಲ್ಲಿ ತ್ವರಿತವಾಗಿ ಕೆಲಸ ಮಾಡುತ್ತಿದೆ ಎಂದು ತಿಳಿಸಿದ ಸಚಿವರು, ಭಾರತದಲ್ಲಿ ಉತ್ಕೃಷ್ಟತಾ ಕೇಂದ್ರ ಸ್ಥಾಪಿಸಲು ಬ್ರೆಜಿಲ್ ಒಮ್ಮತ ವ್ಯಕ್ತಪಡಿಸಿದೆ ಎಂದು ಮಾಹಿತಿ ನೀಡಿದ್ದರು.

**ಧ್ವನಿ: ಶಿವರಾಜ್ ಸಿಂಗ್**

<><><>

ಇತ್ತೀಚೆಗೆ ಮುಕ್ತಾಯಗೊಂಡ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಚುನಾವಣಾ ಅಕ್ರಮಗಳು ಮತ್ತು ಅವರ ಚುನಾವಣಾ ಅಫಿಡವಿಟ್‌ಗಳಲ್ಲಿನ ವ್ಯತ್ಯಾಸಗಳನ್ನು ಆರೋಪಿಸಿ ಸಲ್ಲಿಸಲಾದ ಅರ್ಜಿಗಳಿಗೆ ಸಂಬಂಧಿಸಿದಂತೆ ಪಾಟ್ನಾ ಉಚ್ಚ ನ್ಯಾಯಾಲಯ, ಬಿಹಾರ ವಿಧಾನಸಭೆಯ ೨೮ ಸದಸ್ಯರಿಗೆ ನೋಟಿಸ್ ಜಾರಿ ಮಾಡಿದೆ ಹಾಗೂ ಪ್ರತಿಕ್ರಿಯಿಸುವಂತೆ ಸೂಚಿಸಿದೆ. ಈ ಶಾಸಕರ ವಿರುದ್ಧ ಒಟ್ಟು ४೦ ಅರ್ಜಿಗಳನ್ನು ಸಲ್ಲಿಸಲಾಗಿದೆ. ನ್ಯಾಯಮೂರ್ತಿ ಶಶಿಭೂಷಣ್ ಪ್ರಸಾದ್ ಸಿಂಗ್ ಮತ್ತು ನ್ಯಾಯಮೂರ್ತಿ ಅಶೋಕ್ ಕುಮಾರ್ ಪಾಂಡೆ ನೇತೃತ್ವದ ಪೀಠಗಳು ನಡೆಸಿದ ಪ್ರಾಥಮಿಕ ವಿಚಾರಣೆಯ ನಂತರ ನೋಟೀಸ್‌ಗಳನ್ನು ನೀಡಲಾಗಿದೆ.

<><><>

ಮೇಘಾಲಯದ ಶಿಲ್ಲಾಂಗ್ ಸಂಸದ ಡಾ. ರಿಕಿ ಎಜೆ. ಸಿಂಕಾನ್ ಕಳೆದ ರಾತ್ರಿ ಹೃದಯಾಘಾತದಿಂದ ನಿಧನರಾಗಿದ್ದಾರೆ. ಅವರಿಗೆ ೫೮ ವರ್ಷ ವಯಸ್ಸಾಗಿತ್ತು. ಅಧಿಕೃತ ಮೂಲಗಳ ಪ್ರಕಾರ, ಡಾ. ರಿಕಿ ಅವರು ಫುಟ್ಸಾಲ್ ಎಂಬ ಒಳಾಂಗಣ ಫುಟ್ಬಾಲ್ ಆಡುತ್ತಿದ್ದ ವೇಳೆ ತೀವ್ರ ಹೃದಯಾಘಾತವಾಗಿ ಕುಸಿದು ಬಿದ್ದರು, ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಲಾಯಿತು. ಡಾ. ರಿಕಿ ಅವರು, ರಾಷ್ಟ್ರ ರಾಜಕೀಯದಲ್ಲಿ ಮೇಘಾಲಯದ ಧ್ವನಿಯಾಗಿ ಪರಿಗಣಿಸಲ್ಪಟ್ಟಿದ್ದರು. ಅವರು ವಾಯ್ಸ್ ಆಫ್ ಪೀಪಲ್ಸ್ ಪಕ್ಷದ ಪ್ರಮುಖ ಮುಖಂಡರಾಗಿದ್ದರು. ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಮೇಘಲಾಯ ಮುಖ್ಯಮಂತ್ರಿ ಕಾನ್‌ರಾಡ್ ಸಂಗ್ಮಾ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

<><><>

ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಪುರುಷರ ಟಿ೨೦ ವಿಶ್ವಕಪ್ ಕ್ರಿಕೆಟ್‌ನ ಬಿ ಗುಂಪಿನ ಕೊನೆಯ ಲೀಗ್ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡವು, ಒಮಾನ್ ವಿರುದ್ಧ ಸೆಣಸಲಿದೆ. ಈ ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ನಾಳೆಯಿಂದ ಸೂಪರ್ ೮ರ ಘಟ್ಟದ ಪಂದ್ಯಗಳು ಆರಂಭವಾಗಲಿವೆ.

<><> ಇಲ್ಲಿಗೆ ವಾರ್ತಾ ಪ್ರದೇಶ ಸಮಾಚಾರ ಮುಗಿಯಿತು <><>